4291 (4952) ಶ್ರೀ ಅಪ್ಪಸಾಹೇಬ್(ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ನಗರದಲ್ಲಿ ಉಲ್ಬಣಿಸಿರುವ ಕುಡಿಯುವ ನೀರಿನ ಸಮಸ್ಯೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ರಾಜ್ಯ ಸರ್ಕಾರವು 1994ನೇ ಸಾಲಿನ ಜನಸಂಖ್ಯೆಗೆ ಅನುಗುಣವಾಗಿ ಯೋಜನೆಯನ್ನು ರೂಪಿಸಿದ್ದು, ನಗರದ ಜನಸಂಖ್ಯೆಯು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕುಡಿಯುವ ನೀರಿನ ಸಮಸ್ಯೆ ನಿವಾರಿಸಲು ರಾಜ್ಯ ಸರ್ಕಾರವು 2005ನೇ ಸಾಲಿನ ಜನಸಂಖ್ಯೆಗೆ ಅನುಗುಣವಾಗಿ ಹೊಸ ಯೋಜನೆ, ತಂತ್ರಜ್ಞಾನ, ಜನರೇಟರ್, ಹೆಚ್ಚಿನ ಅನುದಾನ ನೀಡಲು ಉದ್ದೇಶಿಸಿದೆಯೇ;

ಈ) ಹಾಗಿದ್ದಲ್ಲಿ ಕುಡಿಯುವ ನೀರಿನ ಸಮಸ್ಯೆಯ ಶಾಶ್ವತ ನಿವಾರಣೆಗೆ ಏನು ಕ್ರಮ ಕೈಗೊಳ್ಳಲಾಗುವುದು;

ಉ) ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ನೀರಿನ ಸಮಸ್ಯೆಯನ್ನು ಯಾವಾಗ ನಿವಾರಿಸಲಾಗುವುದು?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಹೌದು.

ಆ) ಹೌದು.

ಇ) ನೀರಿನ ಸಮಸ್ಯೆ ತುರ್ತು ನಿವಾರಣೆಗಾಗಿ 2005-06ನೇ ಸಾಲಿನ ಬರ ಪರಿಹಾರ ಕಾಯಕ್ರಮದಡಿಯಲ್ಲಿ ನಗರದಲ್ಲಿ ವಿತರಣಾ ವ್ಯವಸ್ಥೆಯ ಸುಧಾರಣೆ ಹೊಸ ಪಂಪುಗಳ ಅಳವಡಿಕೆ ಹಾಗೂ ಇನ್ನಿತರ ತುರ್ತು ರಿಪೇರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ.

ಈ) ಹಾಲಿ ನೀರು ಸರಬರಾಜು ಯೋಜನೆಯ ಸಾಮರ್ಥ್ಯದ ಹೆಚ್ಚಳದ ಕಾಮಗಾರಿಗಳನ್ನು ಉತ್ತರ ಕರ್ನಾಟಕದ ಅಭಿವೃದ್ಧಿ ಹಣಕಾಸು ಸಂಸ್ಥೆ (ಎ.ಡಿ.ಬಿ) ಯೋಜನೆಯ ಅಡಿಯಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ.

ಉ) ಆದಷ್ಟು ಜಾಗ್ರತೆ ಕ್ರಮ ಕೈಗೊಳ್ಳಲಾಗುವುದು.